# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 901 (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ವರ್ಗಾವಣೆಗೊಂಡಿರುವುದು)
ಸದಸ್ಯರ ಹೆಸರು : ಶ್ರೀ ಟಿ.ಎನ್. ಜವರಾಯಿಗೌಡ (ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : 19.03.2025.
ಉತ್ತರಿಸುವ ಸಚಿವರು : ಕಂದಾಯ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯ ಗ್ರಾಮಗಳಲ್ಲಿರುವ ಗ್ರಾಮಠಾಣಾ, ಊರುಗುಪ್ಪೆ ಸರ್ವೆ ನಂಬರ್ ನಲ್ಲಿ ಅನಾದಿ ಕಾಲದಿಂದಲೂ ಮನೆ ಕಟ್ಟಿಕೊಂಡು ವಾಸ ಮಾಡುತ್ತಿರುವ ನಿವಾಸಿಗಳಿಗೆ ಹಕ್ಕು ಪತ್ರವನ್ನು ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; (ವಿವರಣೆ ನೀಡುವುದು) | ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಬರುವ ಗ್ರಾಮಠಾಣ ಹಾಗೂ ಊರುಗುಪ್ಪೆ ಸರ್ವೆ ನಂಬರ್ ಗಳಲ್ಲಿ ಮನೆ ಕಟ್ಟಿಕೊಂಡು ವಾಸ ಮಾಡುತ್ತಿರುವ ನಿವಾಸಿಗಳಿಗೆ ಸಂಬಂಧಿಸಿದ ಹಕ್ಕು ಪತ್ರ ನೀಡುವ ಬಗ್ಗೆ, ಸಂಬಂಧಿಸಿದ ಗ್ರಾಮ ಪಂಚಾಯತಿಗಳಿಂದ ನಿಯಮಾನುಸಾರ ಕ್ರಮವಹಿಸಬಹುದಾಗಿರುತ್ತದೆ.<br><br>ಗ್ರಾಮಠಾಣ ಹಾಗೂ ಊರುಗುಪ್ಪೆ ಸರ್ವೆ ನಂಬರ್ ಗಳಲ್ಲಿ ಕಂದಾಯ ಇಲಾಖೆಗೆ ಸೇರಿದ ಸರ್ವೆ ನಂಬರ್ ಅಥವಾ ಜಮೀನುಗಳಿದ್ದಲ್ಲಿ ಕರ್ನಾಟಕ ಭೂಕಂದಾಯ ಕಾಯ್ದೆ 1964 ರ ಕಲಂ 94ಸಿ/94ಸಿಸಿ/94ಡಿ ರಂತೆ ಕ್ರಮವಹಿಸಲು ಅವಕಾಶ ಇರುತ್ತದೆ.<br><br>ಗ್ರಾಮೀಣ ಮತ್ತು ನಗರ ಪ್ರದೇಶದಲ್ಲಿ ಸರ್ಕಾರಿ ಜಮೀನಿನಲ್ಲಿ ಅನಧಿಕೃತವಾಗಿ ನಿರ್ಮಿಸಿರುವ ವಾಸದ ಮನೆಗಳನ್ನು ಸಕ್ರಮಗೊಳಿಸಲು ಕರ್ನಾಟಕ ಭೂಕಂದಾಯ ಕಾಯ್ದೆ 1964ರ ಕಲಂ 94ಸಿ ಮತ್ತು ಕಲಂ 94ಸಿಸಿ ರಡಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.<br><br>ಅದರಂತೆ ಸ್ವೀಕರಿಸಿದ ಅರ್ಜಿಗಳನ್ನು ನಿಯಮಾನುಸಾರ ಪರಿಶೀಲಿಸಿ, ಅರ್ಹ ಫಲಾನುಭವಿಗಳಿಗೆ ಹಕ್ಕು ಪತ್ರ ನೀಡಲು ಅವಕಾಶವಿರುತ್ತದೆ. |
| ಆ) | ಸ್ಥಳೀಯ ಸಂಸ್ಥೆಗಳು ಮತ್ತು ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಅಭಿಯಾನದ ಮಾದರಿಯಲ್ಲಿ ಇ-ಖಾತಾ ನೀಡುವ ಪ್ರಕ್ರಿಯೆ ನಡೆಸಲು ಸೂಚನೆ ನೀಡಿದ್ದು, ಈ ಬಗ್ಗೆ ಸರ್ಕಾರದ ಆದೇಶ ಕಾರ್ಯಗತಗೊಳಿಸಲಾಗಿದೆಯೇ? (ಸರ್ಕಾರದ ಸುತ್ತೋಲೆ/ ಆದೇಶದ ಪ್ರತಿಯನ್ನು ಒದಗಿಸುವುದರೊಂದಿಗೆ ವಿವರಣೆ ನೀಡುವುದು) | ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿನ ಕ್ರಮಬದ್ಧವಲ್ಲದ ನಿವೇಶನಗಳು ಮತ್ತು ಕಟ್ಟಡಗಳನ್ನು (ಸರ್ಕಾರಿ/ಸ್ಥಳೀಯ ಸಂಸ್ಥೆ/ಶಾಸನಬದ್ಧ ಸಂಸ್ಥೆ/ಅರಣ್ಯ ಭೂಮಿಯನ್ನು ಹೊರತುಪಡಿಸಿ) ತೆರಿಗೆ ವ್ಯಾಪ್ತಿಗೆ ಒಳಪಡಿಸಲು ಪ್ರತ್ಯೇಕ ವಹಿಯಲ್ಲಿ ದಾಖಲಿಸಲು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ಕ್ಕೆ ತಿದ್ದುಪಡಿ ತರಲಾಗುತ್ತಿದೆ. ಅಧಿನಿಯಮಕ್ಕೆ ತರಲಾಗುವ ತಿದ್ದುಪಡಿಯನ್ವಯ ಈ ಸಂಬಂಧ ನಿಯಮಗಳನ್ನು ರೂಪಿಸಿ ದಿನಾಂಕ:14.06.2013ಕ್ಕೂ ಮೊದಲು ಹಾಗೂ ನಂತರ ನೋಂದಣಿಯಾದ ಎಲ್ಲಾ ನಿವೇಶನಗಳು ಮತ್ತು ಕಟ್ಟಡಗಳಿಗೆ ಅಭಿಯಾನದ ಮಾದರಿಯಲ್ಲಿ ಇ-ಸ್ವತ್ತು ತಂತ್ರಾಂಶದ ಮೂಲಕ ಖಾತೆ ನೀಡಲು ಕ್ರಮ ಕೈಗೊಳ್ಳಲಾಗುವುದು. |

| | | |
|---|---|---|
| ಇ) | ಗ್ರಾಮ ಠಾಣಗಳಿಗೆ, ಊರುಗುಪ್ಪೆ ಸರ್ವೆ ನಂಬರ್ ನಲ್ಲಿರುವ ಸ್ವತ್ತು ಆರ್.ಟಿ.ಸಿ ನಲ್ಲಿ ಗ್ರಾಮಸ್ಥರು ಎಂದು ಬರುತ್ತಿದ್ದು, ಇಂತಹ ಸ್ವತ್ತುಗಳಿಗೆ ಆರ್.ಟಿ.ಸಿ ತರಲು ಸಾಧ್ಯವೇ, ಭೂಪರಿವರ್ತನೆ ಮಾಡಿಸಲು ಸಾಧ್ಯವೇ, ದಯಮಾಡಿ ಸರ್ಕಾರ ಈ ಸಮಸ್ಯೆಯನ್ನು ಬಗೆಹರಿಸಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಲಾಗುವುದೇ? (ಮಾಹಿತಿ ನೀಡುವುದು) | ಗ್ರಾಮಠಾಣಗಳಿಗೆ, ಊರುಗುಪ್ಪೆ ಸರ್ವೆ ನಂಬರ್ ನಲ್ಲಿರುವ ಸ್ವತ್ತು ಪಹಣಿಯಲ್ಲಿ ಗ್ರಾಮಸ್ಥರು ಎಂದು ಬರುತ್ತಿದ್ದಲ್ಲಿ ಪುನಃ ಪಹಣಿಯಲ್ಲಿ ತರುವ ಅವಶ್ಯಕತೆ ಕಂಡು ಬರುವುದಿಲ್ಲ.<br><br>ಇಂತಹ ಪಹಣಿಗಳಲ್ಲಿ ಗ್ರಾಮಸ್ಥರು ಎಂದು ಪಹಣಿ ಕಾಲಂ 9 ಅಥವಾ 11 ರಲ್ಲಿ ನಮೂದಾಗಿರುವುದರಿಂದ ಹಾಗೂ ಖಾಸಗಿ ಖಾತೆದಾರರ ಹೆಸರು ನಮೂದಿರುವುದಿಲ್ಲವಾದ್ದರಿಂದ ಕರ್ನಾಟಕ ಭೂಕಂದಾಯ ಕಾಯ್ದೆ 1964 ರಡಿ ಭೂಪರಿವರ್ತನೆ ಮಾಡಲು ಸಾಧ್ಯವಿರುವುದಿಲ್ಲ.<br><br>ಪ್ರಸ್ತುತ ಪಹಣಿಯಲ್ಲಿ ಮಾಲೀಕರ ಹೆಸರು ನಮೂದಿದ್ದಲ್ಲಿ ಮಾತ್ರ ಭೂ ಪರಿವರ್ತನೆಗೆ ಅರ್ಜಿ ಸಲ್ಲಿಸಲು ಅವಕಾಶವಿರುತ್ತದೆ.<br><br>ಕೃಷಿ ಜಮೀನನ್ನು ವ್ಯವಸಾಯೇತರ ಉದ್ದೇಶಕ್ಕೆ ಭೂ ಪರಿವರ್ತಿಸಲು ಕರ್ನಾಟಕ ಭೂಕಂದಾಯ ಕಾಯ್ದೆ 1964ರ ಕಲಂ 95(2) ರಡಿ ಅವಕಾಶ ಕಲ್ಪಿಸಲಾಗಿದೆ.<br>ಗ್ರಾಮಠಾಣ, ಊರುಗುಪ್ಪೆ ಸ.ನಂ ನಲ್ಲಿರುವ ಸ್ವತ್ತು, ಆರ್ ಟಿ ಸಿ ನಲ್ಲಿ ಗ್ರಾಮಸ್ಥರು ಎಂದು ದಾಖಲಿರುವ ಸ್ವತ್ತುಗಳಿಗೆ ಭೂಪರಿವರ್ತಿಸಲು ಕಾಯ್ದೆಗಳಡಿ ಅವಕಾಶ ಇರುವುದಿಲ್ಲ. |

ಸಂಖ್ಯೆ: ಆರ್‌ಡಿ 56 ಎಲ್‌ಜಿಕ್ಯೂ 2025

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು